## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **14 (88)** |
| ಸದಸ್ಯರ ಹೆಸರು | : | ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 04.12.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸುಮಾರು 17 ವರ್ಷಗಳಿಂದ ಸರ್ಕಾರಿ ಪ್ರಾಥಮಿಕ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಳನ್ನು ಮಾಡಿಕೊಂಡಿರುವುದಿಲ್ಲವೆಂದು ದೈಹಿಕ ಶಿಕ್ಷಕರ ಸಂಘಟನೆಗಳು ಆಪಾದನೆ ಮಾಡುತ್ತಿರುವುದು ನಿಜವೇ; (ಮಾಹಿತಿ ನೀಡುವುದು) | **ಪ್ರಾಥಮಿಕ ಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ**<br>ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ 2008ನೇ ಸಾಲಿನಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಳ್ಳಲಾಗಿದೆ.<br>**ಪ್ರೌಢಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ**<br>ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ, 2014-15ನೇ ಸಾಲಿನಲ್ಲಿ 148 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. |
| ಆ) | ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಪ್ರಾಥಮಿಕ ಪ್ರೌಢಶಾಲೆಗಳಲ್ಲಿ ಮಂಜೂರಾದ ಹುದ್ದೆಗಳೆಷ್ಟು ಮತ್ತು ಸದ್ಯ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು) | **ಪ್ರಾಥಮಿಕ ಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ**<br>1. ರಾಜ್ಯದಲ್ಲಿ ಪ್ರಾಥಮಿಕ ಶಾಲೆಗಳ ಸಂಖ್ಯೆ:41913<br>2. ಮಂಜೂರಾದ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು-6772<br>3. ಕಾರ್ಯ ನಿರತ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು-4127.<br>(ವಿವರವಾದ ಮಾಹಿತಿಯನ್ನು **ಅನುಬಂಧ-1ರಲ್ಲಿರಿಸಿದೆ)**<br>**ಪ್ರೌಢಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ**<br>1. ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ:4844.<br>2. ರಾಜ್ಯ ಸರ್ಕಾರಿ ಪ್ರೌಢಶಾಲೆಗಳಲ್ಲಿರುವ ದೈಹಿಕ ಶಿಕ್ಷಣ ಶಿಕ್ಷಕರ ಮಂಜೂರಾದ ಹುದ್ದೆಗಳ ಸಂಖ್ಯೆ -5210.<br>3. ರಾಜ್ಯ ಸರ್ಕಾರಿ ಪ್ರೌಢಶಾಲೆಗಳಲ್ಲಿರುವ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1 ಶಿಕ್ಷಕರ ಕಾರ್ಯ ನಿರತ ಹುದ್ದೆಗಳ ಸಂಖ್ಯೆ: 3589.<br>(ವಿವರವಾದ ಮಾಹಿತಿಯನ್ನು **ಅನುಬಂಧ-2ರಲ್ಲಿರಿಸಿದೆ)** |
| ಇ) | ಈ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ, ಯಾವ ರೀತಿಯ ಕ್ರಮ ತೆಗೆದುಕೊಳ್ಳಲಾಗಿದೆ; (ವಿವರವಾದ ಮಾಹಿತಿ ನೀಡುವುದು) | **ಪ್ರಾಥಮಿಕ ಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ**<br>ಪ್ರಸ್ತುತ ಖಾಲಿ ಇರುವ ಹುದ್ದೆಗಳ ಪೈಕಿ 2120 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದ್ದು, ಆರ್ಥಿಕ ಇಲಾಖೆಯ ಸಮಾಲೋಚನೆಯಲ್ಲಿರುತ್ತದೆ. |

| | | |
|---|---|---|
| | | **ಪ್ರೌಢಶಾಲಾ ವಿಭಾಗಕ್ಕೆ ಸಂಬಂಧಿಸಿದಂತೆ.**<br><br>ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ 200 ದೈಹಿಕ ಶಿಕ್ಷಕರ ಹುದ್ದೆಯು ಸೇರಿದ್ದು ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಈ | ಸರ್ಕಾರಿ ಪಿ.ಯು ಕಾಲೇಜಿನಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಸಧ್ಯ ಎಷ್ಟು ಜನ ಕಾರ್ಯ ನಿರ್ವಹಿಸುತ್ತಿದ್ದಾರೆ; (ಮಾಹಿತಿ ನೀಡುವುದು) | ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಉಪನ್ಯಾಸಕರು ಯಾರೂ ಇರುವುದಿಲ್ಲ.<br><br>ಆದರೆ, ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿಪುರಸಭೆ), ಕನಕಪುರ ಇಲ್ಲಿ ಒಬ್ಬರು ದೈಹಿಕ ಶಿಕ್ಷಣ ಶಿಕ್ಷಕರು ಮಾತ್ರ ಕಾರ್ಯ ನಿರ್ವಹಿಸುತ್ತಿದ್ದಾರೆ. |
| ಉ | ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯಿಂದ ಟಿಪ್ಪಣಿ ರೂಪದಲ್ಲಿ ಆದೇಶ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? ಸಂಪೂರ್ಣ ವಿವರ ನೀಡುವುದು) | ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯು ಯಾವುದೇ ನಿರ್ಬಂಧ ವಿಧಿಸಿರುವುದಿಲ್ಲ.<br><br>ಆದರೆ, ಆರ್ಥಿಕ ಇಲಾಖೆಯು ದಿನಾಂಕ:14/06/2023ರಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗೆ ಪ್ರಸ್ತುತ ಇರುವ 120 ವಿದ್ಯಾರ್ಥಿಗಳ ಕಾರ್ಯಭಾರದ ಮಾನದಂಡವನ್ನು 500 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ನಿರ್ಣಯಿಸುವಂತೆ ಆರ್ಥಿಕ ಇಲಾಖೆಯು ಸಲಹೆ ನೀಡಿದ್ದು, ಈ ಬಗ್ಗೆ ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ:ಇಪಿ 186 ಎಲ್‌ಬಿಪಿ 2023

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು